<u>**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತಿ.ನರಸೀಪುರ**</u>

**ಸಿ.ಸಿ.1799/2022**

| | | | | |
|---|---|---|---|---|
| 01 | ಹೆಸರು | ಬಿ ಎಸ್ ಕೃಷ್ಣೇಗೌಡ | ಸಿ ಡಬ್ಲೂ | 10 |
| 02 | ತಂದೆಯ ಹೆಸರು | ಕೆ ಸಿದ್ದೇಗೌಡ | ಪಿಡಬ್ಲೂ | 5 |
| 03 | ವಯಸ್ಸು | 45 | ಪ್ರಮಾಣೀಕರಿಸಲಾದ ದಿನಾಂಕಃ | |
| 04 | ಉದ್ಯೋಗ | ವ್ಯವಸಾಯ | 17.03.2026 | |
| 05 | ಊರು | ಬಸವನಹಳ್ಳಿ ಗ್ರಾಮ | | |

<u>**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**</u>

ಈಗ ನೋಡುತ್ತಿರುವ ಮತ್ತೊಂದು ದಾಖಲೆಯಲ್ಲಿರುವ ಸಹಿ ನನ್ನದೆ. ಸದರಿ ದಾಖಲೆಯು ಬಿಡುಗಡೆಯ ಸಂದರ್ಭದಲ್ಲಿ ಜರುಗಿಸಿದ ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿ ಪಿ 3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ ಪಿ 3(ಸಿ) ಎಂದು ಗುರುತಿಸಲಾಯಿತು. ನನಗೆ ನಿ ಪಿ 3 ರಲ್ಲಿ ಬರೆದಿರುವ ವಿಚಾರ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ನಿ ಪಿ 3 ರಂತೆ ಯಾವುದೆ ಮಹಜರ್ ಕ್ರಮ ಜರುಗಿಸಿರುವುದಿಲ್ಲ. ನನಗೆ ನಿ ಪಿ 3 ಅನ್ನು ಯಾರೂ ಓದಿ ಹೇಳಿರುವುದಿಲ್ಲ. ಛಾಯಾಚಿತ್ರವನ್ನು ನೋಡಿ ಸಾಕ್ಷಿ ಗುರುತಿಸಿರುವುದಿಲ್ಲ.

**(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಮಾನ್ಯ ಎ ಪಿ ಪಿ ರವರು ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

<u>**ಪಾಟೀ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**</u>

ದಿಃ05.02.2022 ರಂದು ಕೋಳಿ ಫೀಡ್ಸ್ ಅನ್ನು ಚಾ ಸಾ 1 ರವರರಿಗೆ ಬಿಡುಗಡೆ ಮಾಡುವ ಸಂದರ್ಭದಲ್ಲಿ ಪೊಲೀಸರು ನನ್ನ ಮತ್ತು ಚಾ ಸಾ 9 ರವರ ಸಮಕ್ಷಮ ನಿ ಪಿ 3 ರಂತೆ ಮಹಜರು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ.

ನನ್ನ ಸಮಕ್ಷಮ ನಿ ಪಿ 3 ರಂತೆ ಪೊಲೀಸರು ಮಹಜರು ಜರುಗಿಸಿದ್ದರೂ ಸಹ, ನಾನು ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇರುವುದಿಲ್ಲ ಎಂದು ನುಡಿದಿರುತ್ತಾರೆ.**

ಮರುವಿಚಾರಣೆಃಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿಯಾಗಿದೆ.

(ಸಚಿನ್ ಹೆಚ್ . ಆರ್.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ತಿ.ನರಸೀಪುರ.